**<u>ದಿನಾಂಕಃ 12-08-2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.</u>**

**<u>ಮುಖ್ಯ ವಿಚಾರಣೆ ಅರ್ಜಿದಾರರ ಪರ ವಕೀಲರಿಂದಃ</u>**

ನನ್ನ ಮುಖ್ಯ ವಿಚಾರಣೆಯ ಬಾಬ್ತು ಸಾಕ್ಷ್ಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ. ಅದರಲ್ಲಿ ಹೇಳಿ ಬರೆಸಿರುವ ಎಲ್ಲ ವಿಷಯಗಳು ಸತ್ಯವಾಗಿರುತ್ತವೆ. ಅದರಲ್ಲಿ ಬರೆದಿರುವ ವಿಷಯಗಳನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ. ನಾನು ಹಾಜರು ಪಡಿಸಿರುವ ದಾಖಲೆಗಳನ್ನು ಗುರುತಿಸಲು ಕೇಳಿಕೊಳ್ಳುತ್ತೇನೆ. ಸಾಕ್ಷಿದಾರರು ದಾಖಲಾತಿಗಳನ್ನು ನೋಡಿ ಗುರುತಿಸಿರುತ್ತಾರೆ.

| | |
|---|---|
| ನಿಪಿ-1 | ಎದುರುಗಾರರು ಕೊಟ್ಟ ಅಲಭ್ಯ ಪ್ರಮಾಣ ಪತ್ರ |
| ನಿಪಿ-2 | ವಂಶವೃಕ್ಷದ ನೋಟರಿ ಪತ್ರದ ದೃಢೀಕೃತ ಪ್ರತಿ |
| ನಿಪಿ-3 | ಜಮಾತಿನವರು ನೀಡಿದ ಪ್ರಮಾಣ ಪತ್ರ |
| ನಿಪಿ-4 ರಿಂದ 6 | 1 ರಿಂದ 3 ನೆ ಅರ್ಜಿದಾರರ ಆಧಾರ ಕಾರ್ಡನ ನೋಟರೈಜ್ಡ ಪ್ರತಿ,(ಮೂಲ ಪ್ರತಿಯೊಂದಿಗೆ ತಾಳೆ ಮಾಡಿ ಹಿಂದಿರುಗಿಸಲಾಗಿದೆ) |
| ನಿಪಿ-7 ಮತ್ತು 8 | ದಿನಪತ್ರಿಕೆಗಳು |

ಆದ್ದರಿಂದ ಅರ್ಜಿಯಲ್ಲಿ ಕೇಳಿದಂತೆ ಅರ್ಜಿಯನ್ನು ಪುರಸ್ಕರಿಸಬೇಕೆಂದು ಕೇಳಿಕೊಳ್ಳುತ್ತೇನೆ.

**(ಎದುರುಗಾರರು ಏಕಪಕ್ಷೀಯವಾಗಿದ್ದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.)**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ.

ಸಹಿ/-

2 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು,

ರಾಣೇಬೆನ್ನೂರು.